ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1279
ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾಗಿದ್ದ ದಿನಾಂಕ : 8-03-2022
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಸರ್ಕಾರದ ಯೋಜನೆಗಳಿಗೆ ಮತ್ತು ಫಲಾನುಭವಿ ಆಯ್ಕೆ ಸಮಿತಿಗೆ ವಿಧಾನ ಪರಿಷತ್ತಿನ ಸದಸ್ಯರು ಸಹ ಅಧ್ಯಕ್ಷರಾಗಿರುತ್ತಾರೆಂಬ ಸರ್ಕಾರದ ಸುತ್ತೋಲೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ. ಸರ್ಕಾರದ ಅ.ಸ. ಪತ್ರ ಸಂಖ್ಯೆ:ಸಿಆಸುಇ 40 ಹೆಚ್.ಪಿ.ಎ. 2018, ದಿನಾಂಕ:10.01.2019ರಲ್ಲಿನ ವಿಷಯವು ತಾಲ್ಲೂಕುಮಟ್ಟದ ಸಮಿತಿಗೆ ಸಂಬಂಧಿಸಿರುತ್ತದೆ.
ಆ)	ಹಾಗಿದ್ದಲ್ಲಿ, ಈ ಯೋಜನೆಗೆ ವಿಧಾನ ಪರಿಷತ್ತಿನ ಸದಸ್ಯರು ಸಮಿತಿಯ ಸದಸ್ಯರಾಗಿರುವುದಿಲ್ಲವೆಂದು ಸರ್ಕಾರ ಉತ್ತರ ನೀಡಿರುವುದಕ್ಕೆ ಕಾರಣವೇನು;	ಮಾನ್ಯ ಮುಖ್ಯಮಂತ್ರಿಯವರ ನಗರೋತ್ಥಾನ 4ರ ಯೋಜನೆಯ ಮಾರ್ಗಸೂಚಿಯಲ್ಲಿ ತಾಲ್ಲೂಕುಮಟ್ಟದ ಸಮಿತಿಯನ್ನು ರಚಿಸಿರುವುದಿಲ್ಲ.
ಇ)	ಕಳೆದ ನಗರೋತ್ಥಾನ-3 ರಲ್ಲಿ ಅವ್ಯವಹಾರ ನಡೆದಿದ್ದು, ಕಳಪೆ ಮಟ್ಟದ ಕಾಮಗಾರಿಗಳು ಇನ್ನು ಕೂಡ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೀದರ್ ಜಿಲ್ಲೆಯ 7 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಗರೋತ್ಥಾನ-3ನೇ ಹಂತದ ಯೋಜನೆಯಡಿ ಯಾವುದೇ ಅವ್ಯವಹಾರ ನಡೆದಿರುವ ಬಗ್ಗೆ ಯಾವುದೇ ಪ್ರಕರಣ ದಾಖಲಾಗಿರುವುದಿಲ್ಲ. ನಗರೋತ್ಥಾನ ಯೋಜನೆಯಡಿ ಗುಣಮಟ್ಟದ ಕಾಮಗಾರಿಗಳನ್ನು ನಿರ್ವಹಿಸಲಾಗಿರುತ್ತದೆ.
ಈ)	ಬಂದಿದ್ದಲ್ಲಿ, ಕಳಪೆ ಹಾಗೂ ವಿಳಂಬ ಮಾಡುತ್ತಿರುವ ಗುತ್ತಿಗೆದಾರರ ಹಾಗೂ ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?	ನಗರೋತ್ಥಾನ (ಮುನಿಸಿಪಾಲಿಟಿ)-3ನೇ ಹಂತದ ಯೋಜನೆಯಡಿ ಗುಣಮಟ್ಟದ ಕಾಮಗಾರಿಗಳನ್ನು ನಿರ್ವಹಿಸಲಾಗಿದ್ದು, ಕಳಪೆ ಕಾಮಗಾರಿಗಳನ್ನು ನಿರ್ವಹಿಸಿರುವುದಿಲ್ಲ. ಸದರಿ ಕಾಮಗಾರಿಗಳನ್ನು ಸಕಾಲದಲ್ಲಿ ಹಾಗೂ ಗುತ್ತಿಗೆ ಅವಧಿಯೊಳಗೆ ಪೂರ್ಣಗೊಳಿಸದಿದ್ದ ಪಕ್ಷದಲ್ಲಿ ಗುತ್ತಿಗೆದಾರರ ಬಿಲ್ಲಿನ ಮೊತ್ತದಲ್ಲಿ ಶೇ.10 ರಷ್ಟು ಮೊತ್ತವನ್ನು ತಡೆಹಿಡಿಯಲು ಕ್ರಮವಹಿಸಲಾಗುವುದು ಹಾಗೂ ನಿಯಮಾನುಸಾರ ಸೂಕ್ತ ದಂಡ ವಿಧಿಸಲಾಗುವುದು.

ಕಡತ ಸಂಖ್ಯೆ:ನಅಇ 41 ಸಮಸ 2022

(ಎನ್. ನಾಗರಾಜು (ಎಂ.ಟಿ.ಬಿ))
ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು